ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ತಾಲ್ಲೂಕು ಕಛೇರಿಗೆ ರೈತರ ಅನಗತ್ಯ ಅಲೆದಾಟ ಕುರಿತು

ಶ್ರೀ ನಸೀರ್ ಅಹ್ಮದ್(ವಿಧಾನಸಭೆಯಿಂದ ಚುನಾಯಿತರಾದವರು) -

1068 (1141) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ನೆಲಮಂಗಲ ತಾಲ್ಲೂಕಿನ ಸೋಂಪುರ ಹೋಬಳಿಯ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳ ರೈತರು ಸಣ್ಣಪುಟ್ಟ ಕೆಲಸಗಳಿಗೆ ಅನಗತ್ಯವಾಗಿ ತಾಲ್ಲೂಕು ಕಛೇರಿಗೆ ಅಲೆದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸೋಂಪುರ ಹೋಬಳಿಯ ವ್ಯಾಪ್ತಿಯಲ್ಲಿ ಬರುವ ಕಾಸರಘಟ್ಟ ಗ್ರಾಮದ ಎಷ್ಟು ರೈತರು ಕಂದಾಯ ಕೆಲಸಗಳಿಗೆ ಅರ್ಜಿ ಸಲ್ಲಿಸಿದ್ದಾರೆ; (ಮಾಹಿತಿ ನೀಡುವುದು)

(ಇ) ಕಾಸರಘಟ್ಟ ಗ್ರಾಮದ ಸರ್ವೆ ನಂ. 37/1, 38/3, 48/1, 48/3 ಮತ್ತು ಇತರೆ ಸರ್ವೆ ನಂಬರ್‌ಗಳ ಕೆಲಸಗಳಿಗೆ ಸಂಬಂಧಪಟ್ಟಂತೆ ಯಾವ ದಿನಾಂಕದಂದು ಅರ್ಜಿ ಸಲ್ಲಿಸಿದ್ದಾರೆ; ಇಲ್ಲಿಯವರೆಗೂ ದಾಖಲೆ ಮಾಡಿಕೊಡದಿರಲು ಕಾರಣವೇನು;

(ಈ) ಸದರಿ ಸರ್ವೆ ನಂಬರ್‌ಗಳಿಗೆ ಸಂಬಂಧಪಟ್ಟ ಕಡತವು ಅಸಿಸ್ಟೆಂಟ್ ಕಮಿಷನರ್‌ರವರಿಂದ ಯಾವ ದಿನಾಂಕದಂದು ತಹಶೀಲ್ದಾರರ ಕಛೇರಿಗೆ ಬಂದಿದೆ; ಇಲ್ಲಿಯವರೆಗೂ ಖಾತೆ ಆಗದೇ ರೈತರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ನಿಗಧಿತ ಕಾಲಮಿತಿಯೊಳಗೆ ಖಾತೆ ಮಾಡಿಕೊಡಲಾಗುವುದು?